Karnatak Law Society's
**Vishwanathrao Deshpande Institute of Technology**
**(Approved by AICTE, New Delhi. Affiliated to VTU, Belagavi)**
**(Recognised Under Section 2(f) by UGC, New Delhi)**
**Udyog Vidya Nagar, Haliyal – 581329, Dist: Uttar Kannada (Karnataka)**
**Phone: 08284-220861, 220334, 221409, Fax: 08284-220813**
**www.klsvdit.edu.in** **principal@klsvdit.edu.in**

Date: 23-01-2023

**ಪತ್ರಿಕಾ ಪ್ರಕಟಣೆ:**

# ತಾಂತ್ರಿಕ ಉಪನ್ಯಾಸ ಸರಣಿ ಸಮಾರೋಪ ಸಮಾರಂಭ

ಕೆ. ಎಲ್. ಎಸ್. ವಿ. ಡಿ. ಐ. ಟಿ. ಹಳಿಯಾಳದಲ್ಲಿ ತಾಂತ್ರಿಕ ಉಪನ್ಯಾಸ ಸರಣಿ ಕಾರ್ಯಕ್ರಮದ ಸಮಾರೋಪ ಸಮಾರಂಭವು ಜನವರಿ 21ರಂದು ನೆರವೇರಿತು. ವಿತಾವಿ ಬೆಳಗಾವಿಯ ರಜತ ಮಹೋತ್ಸವ ವರ್ಷದ ಅಂಗವಾಗಿ 25 ತಾಂತ್ರಿಕ ಉಪನ್ಯಾಸ ಕಾರ್ಯಕ್ರಮವನ್ನು ಮಹಾವಿದ್ಯಾಲಯವು ಹಮ್ಮಿಕೊಂಡಿತ್ತು. ಇದರ ಸಮಾರೋಪ ಸಮಾರಂಭಕ್ಕೆ ವಿತಾವಿ ಬೆಳಗಾವಿಯ ಉಪಕುಲಪತಿಗಳಾದ ಡಾ. ವಿದ್ಯಾಶಂಕರ್ ಎಸ್ ಅವರು ಮುಖ್ಯ ಅತಿಥಿಗಳಾಗಿ ಆಗಮಿಸಿದ್ದರು. ಕಾರ್ಯಕ್ರಮವನ್ನು ಉದ್ದೇಶಿಸಿ ಇವರು ಮಾತನಾಡುತ್ತಾ "ಮಹಾವಿದ್ಯಾಲಯವು ಆಯೋಜಿಸಿದ್ದ ತಾಂತ್ರಿಕ ಉಪನ್ಯಾಸ ಕಾರ್ಯಕ್ರಮವನ್ನು ಶ್ಲಾಘಿಸಿದರು. ವಿದ್ಯಾಸಂಸ್ಥೆಗಳನ್ನು ಮುನ್ನಡೆಸುವಲ್ಲಿ ಕರ್ನಾಟಕ ಕಾನೂನು ಸಂಸ್ಥೆ ಬೆಳಗಾವಿಯ ಕಾರ್ಯವೈಕರಿಯನ್ನು ಪ್ರಶಂಸಿಸಿದರು. ವಿತಾವಿ ಬೆಳಗಾವಿಯು ಮುಂಬರುವ ದಿನಗಳಲ್ಲಿ ಕೈಗೊಳ್ಳಲಿರುವ ಕಾರ್ಯ ಯೋಜನೆಗಳ ಕಿರುಪರಿಚಯ ನೀಡಿದರು. ವಿತಾವಿ ಬೆಳಗಾವಿಯು ರಾಷ್ಟ್ರೀಯ ಶಿಕ್ಷಣ ನೀತಿ 2020 ನ್ನು ಅಳವಡಿಸಿಕೊಂಡಿದೆ ಎಂದು ಹೇಳಿದರು. ಗೌರವಾನ್ವಿತ ಅತಿಥಿಗಳಾಗಿ ಆಗಮಿಸಿದ್ದ ಕರ್ನಾಟಕ ಕಾನೂನು ಸಂಸ್ಥೆ ಯ ಮಹಾಪೋಷಕರು ಮತ್ತು ಹಳಿಯಾಳ ದಾಂಡೇಲಿ ಜೋಯ್ಡಾ ವಿಧಾನಸಭಾ ಕ್ಷೇತ್ರದ ಶಾಸಕರಾದ ಸನ್ಮಾನ್ಯ ಶ್ರೀ. ಆರ್ ವಿ ದೇಶಪಾಂಡೆ ಅವರು ಗ್ರಾಮೀಣ ಕ್ಷೇತ್ರದಲ್ಲಿ ಸ್ಥಾಪಿತ ಗೊಂಡಿರುವ ಮಹಾವಿದ್ಯಾಲಯವು ಸಾವಿರಾರು ವಿದ್ಯಾರ್ಥಿಗಳಿಗೆ ಗುಣಮಟ್ಟದ ತಾಂತ್ರಿಕ ಶಿಕ್ಷಣ ನೀಡುತ್ತಿರುವುದು ವಿದ್ಯಾಸಂಸ್ಥೆಯ ಕಾರ್ಯವೈಖರಿಗೆ ಹಿಡಿದ ಕೈಗನ್ನಡಿಯಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು . ಆಡಳಿತ ಮಂಡಳಿ ಮತ್ತು ಪ್ರಾಂಶುಪಾಲರು ಮಹಾವಿದ್ಯಾಲಯವನ್ನು ಪ್ರಗತಿಯತ್ತ ಮುನ್ನಡೆಸುತ್ತಿರುವುದು ಮೆಚ್ಚುಗೆಯ ವಿಷಯ ಎಂದು ಹೇಳಿದರು. ಅಧ್ಯಕ್ಷತೆ ವಹಿಸಿ ಮಾತನಾಡಿದ ಕರ್ನಾಟಕ ಕಾನೂನು ಸಂಸ್ಥೆಯ ಅಧ್ಯಕ್ಷರಾದ ಶ್ರೀ. ಪ್ರದೀಪ್ ಸಾವ್ಕಾರ್ ಅವರು ವಿದ್ಯಾರ್ಥಿಗಳ ಸಮಗ್ರ ಬೆಳವಣಿಗೆಗೆ ಪೂರಕವಾಗುವ ಉಪಕ್ರಮಗಳನ್ನು ಸಂಸ್ಥೆ ಹಾಗೂ ಮಹಾವಿದ್ಯಾಲಯವು ಸದಾ ಕೈಗೊಂಡಿದೆ ಎಂದರು. ಮಹಾವಿದ್ಯಾಲಯದ ಆಡಳಿತ ಮಂಡಳಿಯ ಅಧ್ಯಕ್ಷರಾದ ಶ್ರೀ. ವಿನಾಯಕ ಲೋಕುರ್ ಅವರು 25 ತಾಂತ್ರಿಕ ಉಪನ್ಯಾಸ ಸರಮಾಲೆಯ ಸಂಪೂರ್ಣ ಚಿತ್ರಣವನ್ನು ನೀಡಿದರು. ಇದರಿಂದ ವಿದ್ಯಾರ್ಥಿಗಳಿಗೆ ನೂತನ ತಂತ್ರಜ್ಞಾನ ಹಾಗೂ ಆವಿಷ್ಕಾರದ ಕುರಿತು ಅರಿವು ಮೂಡಲು ಸಹಕಾರಿಯಾಗಿದೆ ಎಂದು ನುಡಿದರು.ಇದೇ ಸಂದರ್ಭದಲ್ಲಿ ಉತ್ತಮ ಶಾಸಕರೆಂದು ಆಯ್ಕೆಯಾಗಿರುವ ಶ್ರೀ. ಆರ್ ವಿ ದೇಶಪಾಂಡೆ ಮತ್ತು ವಿ ತಾ ವಿ ಉಪಕುಲಪತಿಗಳಾದ ಡಾ. ವಿದ್ಯಾಶಂಕರ್ ಎಸ್ ಅವರನ್ನು ಸನ್ಮಾನಿಸಲಾಯಿತು.

ಪ್ರಾಚಾರ್ಯರಾದ ಡಾ. ವಿ. ಎ. ಕುಲಕರ್ಣಿ ಅವರು ಸಭಿಕರನ್ನು ಸ್ವಾಗತಿಸಿದರು. ಮೆಕ್ಯಾನಿಕಲ್ ವಿಭಾಗದ ಮುಖ್ಯಸ್ಥರಾದ ಪ್ರೊ. ಸುಧೀರ್ ಕುಲಕರ್ಣಿ ಅವರು ವಂದಿಸಿದರು. ಪ್ರೊ. ಭಾನುಪ್ರಿಯ ನಿರೂಪಿಸಿದರು. ಮಹಾವಿದ್ಯಾಲಯದ ಎಲ್ಲಾ ಬೋಧಕ ಬೋಧಕೇತರ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.ಈ ತಾಂತ್ರಿಕ ಉಪನ್ಯಾಸ ಕಾರ್ಯಕ್ರಮದಲ್ಲಿ ಕೈಗಾರಿಕಾ ಹಾಗೂ ತಾಂತ್ರಿಕ ಶಿಕ್ಷಣ ಕ್ಷೇತ್ರದಲ್ಲಿ ಉತ್ತಮ ಅನುಭವ ಹೊಂದಿರುವ 25 ಉಪನ್ಯಾಸಕರು ತಮ್ಮ ಜ್ಞಾನವನ್ನು ಹಂಚಿಕೊಂಡರು.

ಪ್ರಾಂಶುಪಾಲರು

Principal
KLS Vishwanathrao Deshpande
Institute of Technology, Haliyal


KLS VDIT
SILVER JUBILEE YEAR OF VTU
25 TECHNICAL TALK SERIES
KLS
VDIT


KLS VDIT